ಮಂಜೂರಾದ ಆರು ಗ್ರಾಮಗಳಲ್ಲಿ 5 ಗ್ರಾಮಗಳಿಗೆ ನೀಡಲಾದ ಗುರಿಗೆ ತಕ್ಕಂತೆ ಎಲ್ಲಾ ಮನೆಗಳು ಪೂರ್ಣಗೊಂಡಿರುತ್ತವೆ. ಉಳಿದ ಒಂದು ಗ್ರಾಮವಾದ ಹಿರೇಹರಕುಣಿಗೆ 25 ಮನೆಗಳ ಗುರಿ ನೀಡಿದ್ದು, ಫಲಾನುಭವಿಗಳು ಮನೆಗಳನ್ನು ಪೂರ್ಣಗೊಳಿಸಿಕೊಳ್ಳಲು ಹೆಚ್ಚಿನ ಆಸಕ್ತಿ ತೋರದ ಕಾರಣ ಈ ಮನೆಗಳು ಪ್ರಗತಿಯಲ್ಲಿರುತ್ತವೆ.

ಮನೆಗಳ ವಿವರ ಈ ಕೆಳಗಿನಂತಿವೆ.

ಗ್ರಾಮ	ನೀಡಲಾದ ಗುರಿ	ಪೂರ್ಣಗೊಂಡ ಮನೆಗಳು	ಪ್ರಗತಿಯಲ್ಲಿರುವ ಮನೆಗಳು
ಕಳಸ	110	110	–
ಗುರುವಿನಹಳ್ಳಿ	40	40	–
ರಟ್ಟಿಗೇರಿ	25	25	–
ಶಿರೂರ	50	50	–
ಸಂಶಿ	40	40	–
ಹಿರೇಹರಕುಣಿ	25	–	25
ಒಟ್ಟು	**290**	**265**	**25**

ಇ) ನವಗ್ರಾಮಗಳನ್ನು ನಿರ್ಮಿಸಲು ಸರ್ಕಾರ ಮಂಜೂರಾತಿ ನೀಡುವುದೇ?

ಇಲ್ಲ

ಚುಕ್ಕೆ ಗುರ್ತಿಲ್ಲದ ಪ್ರಶ್ನೆ ಸಂಖ್ಯೆ : (480)286
ಸದಸ್ಯರ ಹೆಸರು : ಶ್ರೀ ಧ್ರುವನಾರಾಯಣ್ ಆರ್ (ಕೊಳ್ಳೇಗಾಲ)
ಉತ್ತರಿಸುವ ಸಚಿವರು : (ಶ್ರೀ.ವಿಶ್ವೇಶ್ವರ ಹೆಗಡೆ ಕಾಗೇರಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಅ 2007–08ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭವಾದ ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2007–08ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭವಾದ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ ಹಾಗಿದ್ದಲ್ಲಿ, ಕೊಳ್ಳೇಗಾಲ ವಿಧಾನ ಸಭಾ ಕ್ಷೇತ್ರದಲ್ಲಿ 2007–08ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭವಾದ ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

2007–08ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭವಾದ ಪ್ರೌಢಶಾಲೆಗಳ ಸಂಖ್ಯೆ–ಒಟ್ಟು 5

ಪದವಿ ಪೂರ್ವ ಕಾಲೇಜುಗಳ ಸಂಖ್ಯೆ –1 (ಸಂತೆಮರಳ್ಳಿ)

ಇ ಕೊಳ್ಳೇಗಾಲ ವಿಧಾನ ಸಭಾ ಕ್ಷೇತ್ರದಲ್ಲಿ ಶಾಲಾ ಕೊಠಡಿಗಳ ನಿರ್ಮಾಣಕ್ಕೆ 2007–08ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು?

ಕೊಳ್ಳೇಗಾಲ ವಿಧಾನ ಸಭಾ ಕ್ಷೇತ್ರಕ್ಕೆ ಶಾಲಾ ಕೊಠಡಿಗಳ ನಿರ್ಮಾಣಕ್ಕೆ 2007–08ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನ 21.00ಲಕ್ಷ ರೂ.ಗಳು. ಪದವಿ ಪೂರ್ವ ಕಾಲೇಜಿನ ಕಟ್ಟಡ ನಿರ್ಮಾಣಕ್ಕಾಗಿ ಆರ್.ಐ.ಡಿ.ಎಫ್–11ರಡಿ 17.50 ಲಕ್ಷ ರೂ.ಗಳು ಹಾಗೂ ಆರ್.ಐ.ಡಿ.ಎಫ್–12ರ ರಡಿ 9.80ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ.

ಈ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ನಬಾರ್ಡ್‌ನ ಆರ್ಥಿಕ ನೆರವಿನೊಂದಿಗೆ ಹಾಗೂ ರಾಜ್ಯ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಅಡಿಯಲ್ಲಿ ಪ್ರೌಢಶಾಲಾ ಕೊಠಡಿಗಳನ್ನು ನಿರ್ಮಾಣ ಮಾಡುವುದರ ಮೂಲಕ ಕೊರತೆಯನ್ನು ಸರಿದೂಗಿಸಲಾಗುತ್ತಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ನೀಗಿಸಲು ಆರ್.ಐ.ಡಿ.ಎಫ್–11, 12 ಮತ್ತು 13ರಡಿ ಹಾಗೂ ಅಪೆಂಡಿಕ್ಸ್–ಇ ಯೋಜನೆಗಳಡಿ ಅನುದಾನ ಒದಗಿಸಲಾಗಿದೆ.

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (482)287

2) ಸದಸ್ಯರ ಹೆಸರು : ಶ್ರೀ ಧ್ರುವನಾರಾಯಣ್ ಆರ್. (ಕೊಳ್ಳೇಗಾಲ)

3) ಉತ್ತರಿಸುವ ಸಚಿವರು : (ಶ್ರೀ. ರೇವು ನಾಯಕ ಬೆಳಮಗಿ) ಮಾನ್ಯ ಪಶುಸಂಗೋಪನಾ ಸಚಿವರು

ಅ) ರಾಜ್ಯದಲ್ಲಿ ಪ್ರಾಥಮಿಕ ಪಶುಸಂಗೋಪನಾ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ರಾಜ್ಯದಲ್ಲಿ ಒಟ್ಟಾರೆ 4110 ವಿವಿಧ ಪಶುವೈದ್ಯ ಸಂಸ್ಥೆಗಳು ಇವೆ ಅವುಗಳ ವಿವರ ಈ ಕೆಳಕಂಡಂತಿದೆ.

ಕ್ರಮ ಸಂಖ್ಯೆ	ಸಂಸ್ಥೆಯ ಹೆಸರು	ಸಂಖ್ಯೆ
1)	ಪಶು ಆಸ್ಪತ್ರೆ	347
2)	ಪಶುಚಿಕಿತ್ಸಾಲಯ	1914